# ಕರ್ನಾಟಕ ಸರ್ಕಾರ
## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-560052.

**ಸಂ:ಹಿಂವಕ/ತ-4/ಸೇಆಪೂತ/CR-01/2023-24** **ದಿನಾಂಕ: 21.08.2023**

## ಪ್ರಕಟಣೆ

ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2023-24ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ (ಬಾಲಕರಿಗೆ ಮಾತ್ರ).

**ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ನಿಗದಿಗೊಳಿಸಿರುವ ಸಾಮಾನ್ಯ ಅರ್ಹತೆಗಳು:**

1. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ- (ಪ್ರವರ್ಗ-1 ಕ್ಕೆ ರೂ.2.50 ಲಕ್ಷಗಳು ಹಾಗೂ ಪ್ರವರ್ಗ-2(ಎ), 3(ಎ) ಮತ್ತು 3(ಬಿ) ಗಳಿಗೆ ರೂ.1.00 ಲಕ್ಷಗಳು)
2. **ಕನಿಷ್ಠ ವಿದ್ಯಾರ್ಹತೆ** - ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಸಮಾನವಾದ ಗ್ರೇಡ್ ಪಡೆದಿರಬೇಕು.
3. **ವಯೋಮಿತಿ**: ಜನ್ಮ ದಿನಾಂಕ ಮತ್ತು ವಯಸ್ಸು (10ನೇ ತರಗತಿಯ ಅಂಕ ಪಟ್ಟಿಯಲ್ಲಿರುವಂತೆ) ಡಿಸೆಂಬರ್ 31, 2023 ಕ್ಕೆ ಅನ್ವಯಿಸುವಂತೆ ಅಭ್ಯರ್ಥಿಯ ವಯಸ್ಸನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು 01 ಜನವರಿ 2003 ರಿಂದ 01 ಜುಲೈ 2006 (17 ½ ವರ್ಷದಿಂದ 21 ವರ್ಷ) ರ ದಿನಾಂಕಗಳ ನಡುವೆ ಜನಿಸಿರಬೇಕು.
4. **ತರಬೇತಿ ನೀಡುವ ಸ್ಥಳಗಳು:** ತರಬೇತಿಯನ್ನು ದಕ್ಷಿಣಕನ್ನಡ, ಉಡುಪಿ ಮತ್ತು ಉತ್ತರಕನ್ನಡ ಜಿಲ್ಲೆಗಳಲ್ಲಿ ಮಾತ್ರ ನೀಡಲಾಗುವುದು. ಅಭ್ಯರ್ಥಿಗಳು ಸದರಿ ಮೂರು ಜಿಲ್ಲೆಗಳಲ್ಲಿ ತರಬೇತಿಗೆ ಆಯ್ಕೆ ಮಾಡಿಕೊಳ್ಳುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಅರ್ಜಿಯನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಬಹುದು.
5. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಯನ್ನು ಇಲಾಖಾ ವೆಬ್-ಸೈಟ್ **https://bcwd.karnataka.gov.in**ನಿಂದ ಪಡೆಯಬಹುದಾಗಿದೆ.
6. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 15 ನೇ ಸೆಪ್ಟಂಬರ್ 2023**.

**ಸಹಾಯವಾಣಿ**: (ಸಮಯ ಬೆಳಗ್ಗೆ10.00 ರಿಂದ ಸಂಜೆ 5.30ರ ವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಅ) ದಕ್ಷಿಣ ಕನ್ನಡ ಜಿಲ್ಲೆ: ದೂ.ಸಂ.0824-2225078.
ಆ) ಉಡುಪಿ ಜಿಲ್ಲೆ: ದೂ.ಸಂ.0820-2574881.
ಇ) ಉತ್ತರ ಕನ್ನಡ: ದೂ.ಸಂ.08382-226589.
ಈ) ಕೇಂದ್ರ ಕಛೇರಿ: 8050770004.

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.